E Office No:73849

# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜ ಅರಸು ಬಡಾವಣೆ ಟಮಕ, ಕೋಲಾರ-563 103

ಸಂಖ್ಯೆ: ಬೆಂ.ಉ.ವಿ./ಕು.ಸ.ಕಾ/ಹೊ.ಸ್ವಾ.ಸಂ/2646/2024-25 ದಿನಾಂಕ:01.03.2025

**ಅಧಿಸೂಚನೆ**

**ವಿಷಯ** : 2025-26 ನೇ ಸಾಲಿನಿಂದ ಎಸ್.ಇ.ಎ.ಕಾಲೇಜ್ ಆಫ್ ಸೈನ್ಸ್, ಕಾಮರ್ಸ್, ಅಂಡ್ ಆರ್ಟ್ಸ್, ಕಾಲೇಜಿಗೆ ಸ್ವಾಯತ್ತತೆ ನೀಡುವ ಬಗ್ಗೆ.

**ಉಲ್ಲೇಖ:** 1. UGC Letter dated No:F.2-10/2023(AC-Policy) 2nd January 2025.

2. ಇ ಕಛೇರಿ ಸಂ:ಇಡಿ/149/ಯುಬಿವಿ/2024 ಬೆಂಗಳೂರು, ದಿನಾಂಕ: 02.08.2024

3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:01.03.2025

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ದ 64 ನೇ ಪ್ರಕರಣದ (1)ನೇ ಉಪ ಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು, (ಬೆಂಗಳೂರು ವಿಶ್ವವಿದ್ಯಾಲಯದ ಸ್ವಾಯತ್ತತಾ ಕಾಲೇಜು/ಸಂಸ್ಥೆ ಪರಿನಿಯಮಾವಳಿ-2005 ಪ್ರಕರಣ 4.8 ಅಡಿಯಲ್ಲಿ) ಬೆಂಗಳೂರಿನ **ಎಸ್.ಇ.ಎ.ಕಾಲೇಜ್ ಆಫ್ ಸೈನ್ಸ್, ಕಾಮರ್ಸ್, ಅಂಡ್ ಆರ್ಟ್ಸ್ ಕಾಲೇಜು, ಏಕ್ತನಗರ, ಬಸವನಪುರ, ವೀರ್ಗೋನಗರ ಅಂಚೆ, ಬೆಂಗಳೂರು – 560 049.**

ಇವರು ನಡೆಸುತ್ತಿರುವ ಈ ಕೆಳಗೆ ನಮೂದಿಸಿರುವ ಕೋರ್ಸುಗಳಿಗೆ ಕೆಳಕಂಡ ಷರತ್ತಿಗೊಳಪಟ್ಟು ಶೈಕ್ಷಣಿಕ ಸ್ವಾಯತ್ತತೆಯನ್ನು ಉಲ್ಲೇಖ-1ರಲ್ಲಿ ವಿಶ್ವವಿದ್ಯಾಲಯದ ಧನ ಸಹಾಯ ಆಯೋಗ (UGC) ನಿಗದಿಪಡಿಸಿರುವಂತೆ **2025-26 ಶೈಕಣಿಕ ಸಾಲಿನಿಂದ 2029-30 ನೇ ಶೈಕ್ಷಣಿಕ ಸಾಲಿನವರೆಗೂ ಮಂಜೂರು ಮಾಡಲಾಗಿದೆ.**

| **ಕೋರ್ಸ್** | **ವಿಷಯ** | **ವಿದ್ಯಾರ್ಥಿ ಪ್ರಮಾಣ** |
|---|---|---|
| ಬಿ.ಎ | ಅರ್ಥಶಾಸ್ತ್ರ, ಇತಿಹಾಸ, ರಾಜ್ಯ ಶಾಸ್ತ್ರ, | 30(ಮೂವತ್ತು) |
| ಬಿ.ಎಸ್ಸಿ | ಗಣಕ ವಿಜ್ಞಾನ ,ವಿದ್ಯುನ್ಮಾನ, ಗಣಿತ ಶಾಸ್ತ್ರ, | 30(ಮೂವತ್ತು) |
| ಬಿ.ಕಾಂ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 100(ಒಂದು ನೂರು) |
| ಬಿ.ಬಿ.ಎ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |
| ಬಿ.ಸಿ.ಎ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 120(ನೂರ ಇಪ್ಪತ್ತು) |
| ಬಿ.ಎ | ಕ್ರಿಮಿನಾಲಾಜಿ, ಮನಃಶಾಸ್ತ್ರ, ಪತ್ರಿಕೋದ್ಯಮ | 30 (ಮೂವತ್ತು) |
| ಬಿ.ಎ | ಇತಿಹಾಸ, ಪ್ರವಾಸೋದ್ಯಮ, ಪತ್ರಿಕೋದ್ಯಮ | 30 (ಮೂವತ್ತು) |
| ಬಿ.ಕಾಂ | ಲಾಜಿಸ್ಟಿಕ್ಸ್ ಅಂಡ್ ಸಪ್ಲೇ ಚೈನ್ ಮ್ಯಾನೇಜ್‌ಮೆಂಟ್ | 100 (ನೂರು) |
| ಬಿ.ಬಿ.ಎ | ಏವಿಯೇಷನ್ ಮ್ಯಾನೇಜ್ಮೆಂಟ್ | 60 (ಅರವತ್ತು) |
| ಬಿ.ಎಸ್.ಡಬ್ಲ್ಯು | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 30(ಮೂವತ್ತು) |

| | | |
|---|---|---|
| ಬಿ.ಎಸ್ಸಿ | ರಸಾಯನಶಾಸ್ತ್ರ, ಜೀವ ತಂತ್ರಜ್ಞಾನ, ಜೀವ ವಿಜ್ಞಾನ | 30(ಮೂವತ್ತು) |
| ಬಿ.ಎಸ್ಸಿ | ಮನಃಶಾಸ್ತ್ರ, ರಸಾಯನಶಾಸ್ತ್ರ, ಗಣಿತ ಶಾಸ್ತ್ರ | 30(ಮೂವತ್ತು) |
| ಬಿ.ಎಸ್ಸಿ | ಭೌತಶಾಸ್ತ್ರ,ಗಣಿತ ಶಾಸ್ತ್ರ, ರಸಾಯನಶಾಸ್ತ್ರ | 60 (ಅರವತ್ತು) |
| ಬಿ.ಎಸ್ಸಿ | ಸಸ್ಯ ಶಾಸ್ತ್ರ,ಪ್ರಾಣಿ ಶಾಸ್ತ್ರ, ಭೂವಿಜ್ಞಾನ | 30(ಮೂವತ್ತು) |
| ಬಿ.ಎಸ್ಸಿ | ಕ್ಲಿನಿಕಲ್ ಅಂಡ್ ನ್ಯೂಟ್ರಿಷನ್ ಅಂಡ್ ಡೈಟೆಟಿಕ್ಸ್ | 30(ಮೂವತ್ತು) |
| ಬಿ.ಎಸ್ಸಿ | ಫೋರೆನ್ಸಿಕ್ ಸೈನ್ಸ್ | 60 (ಅರವತ್ತು) |
| ಬಿ.ಹೆಚ್.ಎಂ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 120(ನೂರಇಪ್ಪತ್ತು) |
| ಬಿ.ಟಿ.ಟಿ.ಎಂ | ಟೂರಿಸಂ ಮತ್ತು ಟ್ರಾವೆಲ್ ಮ್ಯಾನೇಜ್ಮೆಂಟ್ | 60 (ಅರವತ್ತು) |
| ಎಂ.ಟಿ.ಟಿ.ಎಂ | ವಿಶ್ವವಿದ್ಯಾಲಯದ ಪರಿನಿಯಮಾವಳಿಗಳಂತೆ | 40(ನಲವತ್ತು) |
| ಎಂ.ಕಾಂ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 50(ಐವತ್ತು) |
| ಎಂ.ಸಿ.ಎ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 120(ಒಂದು ನೂರ ಇಪ್ಪತ್ತು) |
| ಎಂ.ಬಿ.ಎ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 120(ನೂರಇಪ್ಪತ್ತು) |
| ಎಂ.ಎ | ಅರ್ಥಶಾಸ್ತ್ರ | 30 (ಮೂವತ್ತು) |
| ಎಂ.ಎ | ಇಂಗ್ಲೀಷ್ | 30 (ಮೂವತ್ತು) |
| ಎಂ.ಎ | ಕನ್ನಡ | 20 (ಇಪ್ಪತ್ತು) |
| ಎಂ.ಎಸ್ಸಿ | ಗಣಕ ವಿಜ್ಞಾನ | 20(ಇಪ್ಪತ್ತು) |
| ಎಂ.ಎಸ್ಸಿ | ಸಾವಯವ ರಸಾಯನಶಾಸ್ತ್ರ(Organic Chemistry) | 40(ನಲವತ್ತು) |
| ಎಂ.ಎಸ್. ಡಬ್ಲ್ಯೂ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 40(ನಲವತ್ತು) |
| ಬಿ.ಎಸ್ಸಿ | ಫುಡ್ ಸೈನ್ಸ್ ಅಂಡ್ ನ್ಯೂಟ್ರಿಷನ್<br>Food Science And Nutrition | 30(ಮೂವತ್ತು) |
| ಎಂ.ಎಸ್ಸಿ | ಸಸ್ಯ ಶಾಸ್ತ್ರ(BOTANY) | 30(ಮೂವತ್ತು) |
| ಎಂ.ಎಸ್ಸಿ | (INORGANIC CHEMISTRY) | 40(ನಲವತ್ತು) |
| ಎಂ.ಎಸ್ಸಿ | (PHYSICAL CHEMISTRY) | 30(ಮೂವತ್ತು) |

**ಷರತ್ತುಗಳು:**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕಾಲೇಜಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದು ಶಾಶ್ವತ ಅನುದಾನ ರಹಿತ ಕಾಲೇಜೆಂದು ಪರಿಗಣಿಸತಕ್ಕದ್ದು.
2. ಈ ಸ್ವಾಯತ್ತತೆಯು ಶೈಕ್ಷಣಿಕ ಸ್ವಾಯತ್ತತೆಯು ಮಾತ್ರ ಆಗಿರುತ್ತದೆ.
3. ಈ ಸ್ವಾಯತ್ತತೆಯು ಮಂಜೂರು ಮಾಡಲ್ಪಟ್ಟಿರುವ ಕೋರ್ಸ್‌ಗಳಿಗೆ ಮಾತ್ರ ಅನ್ವಯಿಸುತ್ತದೆ.

4. ಕಾಲೇಜು ರಾಜ್ಯ ಸರ್ಕಾರವು ಜಾರಿಗೊಳಿಸಿರುವ ಮೀಸಲಾತಿ ನಿಯಮಗಳನ್ನು ವಿದ್ಯಾರ್ಥಿಗಳ ಪ್ರವೇಶದಲ್ಲಿ ಮತ್ತು ಸಿಬ್ಬಂದಿಗಳ ನೇಮಕಾತಿಗಳಲ್ಲಿ ತಪ್ಪದೇ ಅನುಸರಿಸತಕ್ಕದ್ದು.

5. ಕಾಲೇಜು ಕಾಲ ಕಾಲಕ್ಕೆ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕಾದ ವಾರ್ಷಿಕ ಶುಲ್ಕ, ನೊಂದಣಿ ಶುಲ್ಕ, ಎನ್.ಎಸ್.ಎಸ್. ಶುಲ್ಕ, ಅರ್ಹತಾ ಶುಲ್ಕ, ಕ್ರೀಡಾ ಶುಲ್ಕ, ಸಾಂಸ್ಕೃತಿಕ ಶುಲ್ಕ ಮತ್ತು ಇತರೇ ಅನ್ವಯವಾಗುವ ಶುಲ್ಕಗಳನ್ನು ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಂದಾಯ ಮಾಡತಕ್ಕದ್ದು.

6. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಸ್ವಾಯತ್ತತಾ ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

7. ಕಾಲೇಜು ಸ್ವಾಯತ್ತತಾ ಪರಿನಿಯವಾವಳಿಯಲ್ಲಿ ಸೂಚಿಸಿರುವಂತೆ ಕಾಲ ಕಾಲಕ್ಕೆ ಅನ್ವಯವಾಗುವ ವರದಿಗಳನ್ನು ಕಾಲೇಜು ತಪ್ಪದೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸತಕ್ಕದ್ದು.

8. ಹಾಲಿ ಇರುವ ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ವಿದ್ಯಾರ್ಥಿ ಪ್ರಮಾಣವನ್ನು ಹೆಚ್ಚಿಸಬಾರದು.

9. ಹೊಸ ಕೋರ್ಸುಗಳನ್ನು ಪ್ರಾರಂಭಿಸುವ ಮುನ್ನ ವಿಶ್ವವಿದ್ಯಾಲಯದ ಪೂರ್ವಾನುಮತಿಯನ್ನು ಪಡೆಯಬೇಕು.

10. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು ಕಾಲೇಜು ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

11. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ದಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು, ವಿದ್ಯಾರ್ಥಿಗಳನ್ನು ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

12. ಕಾಲೇಜು/ಆಡಳಿತ ಮಂಡಳಿ ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು. ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು, ವಿಶ್ವವಿದ್ಯಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

13. ವೈಶಾಕ v/s ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

14. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

15. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

16. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

17. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.
18. ಸ್ಥಾಯಿ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಇವುಗಳನ್ನು ಪಾಲಿಸಿದ ಬಗ್ಗೆ ವರದಿಯನ್ನು ವಿಶ್ವವಿದ್ಯಾಲಯಕ್ಕೆ 15 ದಿನಗಳ ಒಳಗಾಗಿ ಕಳುಹಿಸತಕ್ಕದ್ದು.
19. ಸ್ಥಾಯಿ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತುನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಗೂ ಇವುಗಳನ್ನು ಪಾಲಿಸಿದ ಬಗ್ಗೆ ವರದಿಯನ್ನು ವಿಶ್ವವಿದ್ಯಾಲಯಕ್ಕೆ 15 ದಿನಗಳ ಒಳಗಾಗಿ ಕಳುಹಿಸತಕ್ಕದ್ದು.
20. ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಮುಚ್ಚಳಿಕೆ ಪತ್ರದ ಮಾದರಿಯನ್ನು ರೂ.200/-ಗಳ ಛಾಪಾಕಾಗದದಲ್ಲಿ ಬೆರಳಚ್ಚು ಮಾಡಿ ಕಾಲೇಜಿನ ಅಧ್ಯಕ್ಷರು/ಪ್ರಾಂಶುಪಾಲರಿಂದ ಸಹಿ ಮಾಡಿಸಿ, ವಿಶ್ವವಿದ್ಯಾಲಯಕ್ಕೆ 15 ದಿನಗಳ ಒಳಗಾಗಿ ಸಲ್ಲಿಸತಕ್ಕದ್ದು.

ಆದೇಶಾನುಸಾರ

ಕುಲಸಚಿವರು

ಕುಲಸಚಿವರು
ಬೆಂಗಳೂರು ಉತ್ತರ ವಿಶ್ವವಿದ್ಯಾಲಯ
ಟಮಕ, ಕೋಲಾರ, ಕರ್ನಾಟಕ-563 103.

ಗೆ,

1. **ಅಧ್ಯಕ್ಷರು/ ಕಾರ್ಯದರ್ಶಿ,**
**ಏಕ್ತನಗರ ಬಸವನಪುರ, ವಿರ್ಗೋನಗರ ಅಂಚೆ,**
**ಬೆಂಗಳೂರು-560 049**

2. **ಪ್ರಾಂಶುಪಾಲರು,**
**ಏಕ್ತನಗರ ಬಸವನಪುರ, ವಿರ್ಗೋನಗರ ಅಂಚೆ,**
**ಬೆಂಗಳೂರು-560 049**

ಪ್ರತಿಗಳು:

1) ಸರ್ಕಾರದ ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು-1.
2) ಅಧ್ಯಕ್ಷರು / ಕಾರ್ಯದರ್ಶಿಯವರು, ವಿಶ್ವವಿದ್ಯಾಲಯ, ಧನ ಸಹಾಯ ಆಯೋಗ, ಬಹದ್ದೂರು ಷಾ ಜಾಪರ್ ಮಾರ್ಗ, ನವದೆಹಲ್ಲಿ-110002
3) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-1.
4) ಪ್ರಾದೇಶಿಕ ನಿರ್ದೇಶಕರು, ವಿಶ್ವವಿದ್ಯಾಲಯ ಧನಸಹಾಯ ಆಯೋಗ, ಪಿ.ಕೆ ಬ್ಲಾಕ್ ಅರಮನೆ ರಸ್ತೆ, ಬೆಂಗಳೂರು-01
5) ಆಪ್ತಶಾಖೆ,ಕುಲಪತಿಗಳ ಕಛೇರಿ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ.
6) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ.
7) ವಿತ್ತಾಧಿಕಾರಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ
8) ಕಛೇರಿ ಪ್ರತಿ.